





ರೂರಲ್ ಮಿರರ್.ಕಾಂ


# ಅಡಿಕೆಗೆ ವ್ಯಾಪಕವಾಗಿ ಹರಡಿದ ಕೊಳೆರೋಗ



ಈ ಬಾರಿ ಹವಾಮಾನವು ಅಡಿಕೆ ಬೆಳೆಗಾರರಿಗೆ ಕೈಕೊಟ್ಟಿದೆ. ಮಾರ್ಚ್ ತಿಂಗಳ ನಂತರ ವಿಪರೀತವಾದ ತಾಪಮಾನವಾದರೆ, ಇದೀಗ ವಿಪರೀತ ಮಳೆ. ಮೇ.17 ಸುಮಾರಿಗೆ ಆರಂಭವಾದ ಮಳೆ ಇನ್ನೂ ಕಡಿಮೆಯಾಗಿಲ್ಲ. ವಿಪರೀತ ಮಳೆಯಿಂದಾಗಿ ಮಲೆನಾಡು ಮತ್ತು ಕರಾವಳಿ ಭಾಗಗಳಲ್ಲಿ ಅಡಿಕೆ ಬೆಳೆಗೆ ಕೊಳೆರೋಗ ಬಾಧಿಸಿದೆ. ಮಳೆ ಮತ್ತಷ್ಟು ಹೆಚ್ಚಾಗುತ್ತಿದೆ. ಹವಾಮಾನ ವರದಿಗಳು ಇನ್ನೂ 10 ದಿನಗಳ ಕಾಲ ಮಳೆ ಇದೆ ಇನ್ನುತ್ತವೆ. ಕೊಳೆರೋಗ ನಿಯಂತ್ರಣಕ್ಕೆ ಇನ್ನಿಲ್ಲದ ಪ್ರಯತ್ನವನ್ನು ಕೃಷಿಕರೇ ಮಾಡುತ್ತಿದ್ದಾರೆ. ಈಗಾಗಲೇ ಹಲವು ಸಮಸ್ಯೆಗಳಿಂದ ಕಂಗೆಟ್ಟಿದ್ದ ಅಡಿಕೆ ಬೆಳೆಗಾರರಿಗೆ ಈ ಬಾರಿ ಆತಂಕ ಹೆಚ್ಚಾಗುತ್ತಿದೆ.

ಅಡಿಕೆ ಬೆಳೆಗೆ ಹೆಚ್ಚಾಗಿ ಜೂನ್ ಮೊದಲ ವಾರದಲ್ಲಿ ಮಳೆಯ ಕಾರಣದಿಂದ ಕೊಳೆರೋಗ ಬಾರದಂತೆ ಬೋರ್ಡೋ ದ್ರಾವಣವನ್ನು ಅಡಿಕೆ ಬೆಳೆಗಾರರು ಹಿಂದಿನಿಂದಲೂ ಸಿಂಪಡಿಸಿಕೊಂಡು ಬರುತ್ತಿದ್ದರು. ಈಚೆಗೆ ಅದರ ಮುಂದುವರಿದ ಭಾಗವಾಗಿ ವಿವಿಧ ಔಷಧಿಗಳನ್ನು ಅಂದರೆ, ಶಿಲೀಂದ್ರನಾಶಕಗಳನ್ನು ಸಿಂಪಡಣೆ ಮಾಡುತ್ತಿದ್ದರು. ಕೆಲವು ಸಮಯಗಳಿಂದ ಪೊಟಾಸಿಯಂ ಅಂಶ ಇರುವ ಔಷಧಿಯನ್ನು ಕೂಡಾ ಸಿಂಪಡಿಸುತ್ತಿದ್ದರು. ಹೆಚ್ಚಿನ ಬೆಳೆಗಾರರು ದೀರ್ಘ ಅವಧಿಯ ಪರಿಣಾಮಗಳ ಕಡೆಗೆ ಯೋಚನೆ ಮಾಡುತ್ತಿದ್ದರು. ಜೂನ್ ಗೆ ಆರಂಭವಾದ ಮಳೆ ಜುಲೈ ಅಂತ್ಯ-ಆಗಸ್ಟ್ ಆರಂಭದ ಸಮಯಕ್ಕೆ ಹೆಚ್ಚಾಗಿ ಕಡಿಮೆಯಾಗುತ್ತಿತ್ತು. ಈ ಹಂತದಲ್ಲಿ ಎರಡನೇ ಬಾರಿ ಔಷಧಿ ಸಿಂಪಡಿಸಿ ನೆಮ್ಮದಿಯಿಂದ ಇರುತ್ತಿದ್ದರು. ಒಮ್ಮೆಯೂ ಸಿಂಪಡಣೆ ಆಗದೇ ಇದ್ದರೆ ಮಾತ್ರವೇ ಕೊಳೆರೋಗ ಬಾಧಿಸುತ್ತಿತ್ತು. ಆದರೆ ಈ ಬಾರಿ ಯಾವ ಔಷಧಿಗಳನ್ನು ಸರಿಯಾಗಿ ಸಿಂಪಡಿಸಲು ಅಡಿಕೆ ಬೆಳೆಗಾರರಿಗೆ ಹವಾಮಾನವು ಅವಕಾಶ ನೀಡಲಿಲ್ಲ. ಪರಿಣಾಮವಾಗಿ ಕೊಳೆ ರೋಗ ಉಲ್ಬಣಿಸುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ಈ ಬಾರಿ ವಿಪರೀತವಾಗಿ ಕೊಳೆರೋಗ ಕಂಡಿದೆ.


ಹೆಚ್ಚಿನ ಓದಿಗೆ : www.theruralmirror.com


# ಮಳೆಯಲ್ಲೂ ಇವರು ಔಷಧಿ ಸಿಂಪಡಿಸುತ್ತಾರೆ..!

ಅಡಿಕೆಗೆ ಕೊಳೆರೋಗ ವ್ಯಾಪಕವಾಗುತ್ತಿದೆ. ವಾರದ ಮೊದಲು ಕೆಲವು ಕಡೆ ಮಾತ್ರವೇ ಅಡಿಕೆಗೆ ಕೊಳೆರೋಗ ಇರುವ ಬಗ್ಗೆ ಮಾತನಾಡುತ್ತಿದ್ದರೆ, ಇದೀಗ ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲೆಡೆಯೂ ಅಡಿಕೆ ಬೆಳೆಗಾರರು ಕೊಳೆರೋಗದ ಬಗ್ಗೆ ಮಾತನಾಡುತ್ತಿದ್ದಾರೆ. ಮಲೆನಾಡು-ಕರಾವಳಿ ಭಾಗದಲ್ಲಿ ಮಳೆ ಕಡಿಮೆಯಾಗುತ್ತಿಲ್ಲ. ಹೀಗಾಗಿ ಕೊಳೆರೋಗವೂ ಹೆಚ್ಚಾಗುವ ಆತಂಕ ಇದೆ. ಮಳೆಯ ಮಧ್ಯೆಯೇ ಇಂದು ಕೆಲವು ಕಡೆ, ಔಷಧಿ ಸಿಂಪಡಣೆ ಮಾಡುವ ಬಗ್ಗೆ ಕೃಷಿಕರು ಮಾಹಿತಿ ಹಂಚಿಕೊಂಡಿದ್ದಾರೆ.

ವಾರದ ನಂತರ ಮಳೆ ಕಡಿಮೆಯಾಗುತ್ತದೆ ಎನ್ನುವ ಹವಾಮಾನ ಮಾಹಿತಿಯಿಂದ ಔಷಧಿ ಸಿಂಪಡಣೆಗೆ ಸಿದ್ಧತೆ ನಡೆಸಿದ್ದ ಅಡಿಕೆ ಬೆಳೆಗಾರರಿಗೆ ಮತ್ತೆ ನಿರಾಸೆ ಕಾದಿದೆ. ಇನ್ನೂ ಒಂದು ವಾರಗಳ ಕಾಲ ಮಳೆ ಇದೆ ಎನ್ನುವ ಹವಾಮಾನ ಮಾಹಿತಿಯು ಮತ್ತಷ್ಟು ಕಂಗೆಡಿಸಿದೆ. ಹೀಗಾಗಿ ಈಗ ಮಳೆ ಇರುವಾಗಲೂ ಔಷಧಿ ಸಿಂಪಡಣೆ ಮಾಡಬಹುದಾ? ಎನ್ನುವ ಬಗ್ಗೆ ಕೃಷಿ ಗುಂಪಿನಲ್ಲಿ ಚರ್ಚೆ ನಡೆಯುತ್ತಿದೆ. ಕೆಲವು ಕಡೆ ಬೋರ್ಡೋ ಬದಲಾಗಿ ಮೆಟಲಾಕ್ಸಿಲ್ ಸಿಂಪಡಣೆ ಮಾಡಿ ಮಳೆ ಕಡಿಮೆಯಾದ ಬಳಿಕ ಬೋರ್ಡೋ ಸಿಂಪಡಣೆಯ ಬಗ್ಗೆಯೂ ಚಿಂತನೆ ನಡೆಸಿದ್ದಾರೆ. ಯಾವುದಕ್ಕೂ ಮಳೆ ಕಡಿಮೆಯಾಗಬೇಕಲ್ಲ ಎನ್ನುವುದೇ ಎಲ್ಲರ ಅಭಿಪ್ರಾಯದ ನಡುವೆ, ಫೈಬರ್ ದೋಟಿಯ ಮೂಲಕ ಔಷಧಿ ಸಿಂಪಡಿಸುವ ಬಗ್ಗೆ ಕೃಷಿಕರೊಬ್ಬರು ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಮಳೆ ಬಿಟ್ಟು 20-25 ನಿಮಿಷದಲ್ಲಿ ದೋಟಿಯ ಮೂಲಕ ಔಷಧಿ ಸಿಂಪಡಣೆ ಮಾಡಬಹುದಾಗಿದೆ, ಗಾಳಿಯ ಸಂಚಾರ ಇದ್ದರೆ ಅಡಿಕೆ ಗೊನೆ ಈ ಸಮಯದಲ್ಲಿ ಒಣಗುತ್ತದೆ. ತಕ್ಷಣವೇ ದೋಟಿಯಲ್ಲಿ ಔಷಧಿ ಸಿಂಪಡಿಸಿ ರೋಗವನ್ನು ಹರಡದಂತೆ ಕ್ರಮ ಕೈಗೊಳ್ಳಬಹುದು. ಆದರೆ, ಇಂತಹ ಹೊತ್ತಲ್ಲಿ ಔಷಧಿಯನ್ನು ಸ್ವಲ್ಪ ಹೆಚ್ಚು ಕಾಲ ಸಿಂಪಡಿಸಬೇಕು ಹಾಗೂ ಔಷಧಿ ಬಿಟ್ಟ ಬಳಿಕ ಕನಿಷ್ಟ 5-10 ನಿಮಿಷ ಮಳೆ ಬಾರದೇ ಇದ್ದರೆ ಉತ್ತಮ, ಈ ಅಭಿಪ್ರಾಯವನ್ನು ಹಂಚಿಕೊಂಡವರು ಕೃಷಿಕ ದೇವಿಪ್ರಸಾದ್ ಪುಣಚ. ಇಂತಹ ಉಪಾಯಗಳು ಇದ್ದರೆ ನೀವೂ ಹಂಚಿಕೊಂಡರೆ ಇತರ ಕೃಷಿಕರಿಗೂ ಅನುಕೂಲ

# ಕೊಳೆರೋಗ ಸಮೀಕ್ಷೆ




ಈ ಬಾರಿಯ ಮಳೆಯಿಂದ ಅಡಿಕೆಗೆ ವ್ಯಾಪಕವಾಗಿ ಕೊಳೆರೋಗ ಬಾಧಿಸಿರುವ ಬಗ್ಗೆ ಕೃಷಿಕರು ಹೇಳಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಅಡಿಕೆ ಬೆಳೆಯುವ ನಾಡಿನಿಂದ ಬೆಳೆಗಾರರ ಧ್ವನಿ ಕೇಳುತ್ತಿದೆ. ಆದರೆ, ಕೊಳೆರೋಗ ಎಷ್ಟು ಬಾಧಿಸಿದೆ, ಎಷ್ಟು ಪ್ರಮಾಣದಲ್ಲಿ ಅಡಿಕೆ ಬೆಳೆ ನಷ್ಟವಾಗಬಹುದು ಎನ್ನುವ ಅಂದಾಜು ಸದ್ಯಕ್ಕಿಲ್ಲ. ಹೀಗಾಗಿ  ಅಡಿಕೆ ಕೊಳೆರೋಗದ ತೀವ್ರತೆ ಹಾಗೂ ನಷ್ಟದ ಬಗ್ಗೆ ಅಖಿಲ ಭಾರತ ಅಡಿಕೆ ಬೆಳೆಗಾರರ ಸಂಘ ಹಾಗೂ ದ ರೂರಲ್ ಮಿರರ್.ಕಾಂ ಆನ್ ಲೈನ್ ಮೂಲಕ ಸಮೀಕ್ಷೆ ಮಾಡಲು ಮುಂದಾಗಿದೆ.







ರೂರಲ್ ಮಿರರ್.ಕಾಂ


# ಕೆಂಪುಕಲ್ಲು, ಮರಳಿನ ಅಭಾವ-ಕ್ರಮಕೈಗೊಳ್ಳಲು ಒತ್ತಾಯ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು ಹಾಗೂ ಮರಳು ಅಭಾವದಿಂದ ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಗಿತಗೊಂಡಿದ್ದು, ಇದರಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ಜನಸಾಮಾನ್ಯರು, ಕಾರ್ಮಿಕರು ಹಾಗೂ ಈ ಉದ್ಯಮವನ್ನು ನಂಬಿಕೊಂಡಿರುವ ಲಕ್ಷಾಂತರ ಕುಟುಂಬಗಳ ಹಿತ ಕಾಪಾಡುವುದಕ್ಕೆ ರಾಜ್ಯ ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಒತ್ತಾಯಿಸಿದ್ದಾರೆ.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಜನವಿರೋಧಿ ಹಾಗೂ ಕಾರ್ಮಿಕ ವಿರೋಧಿ ಕ್ರಮಗಳಿಂದಾಗಿ ದಕ್ಷಿಣ ಕನ್ನಡದಲ್ಲಿ ಈಗ ಕಟ್ಟಡ ಕಾಮಗಾರಿಗಳಿಗೆ ಕೆಂಪುಕಲ್ಲು-ಮರಳು ಸಿಗದಂತೆ ಆಗಿದೆ. ಜಿಲ್ಲೆಯಲ್ಲಿ ಈಗಾಗಲೇ ನಿರ್ಮಾಣ ಕೆಲಸಗಳು ಬಹುತೇಕ ಸ್ಥಗಿತಗೊಂಡು ಅದನ್ನು ನೇರ ಹಾಗೂ ಪರೋಕ್ಷವಾಗಿ ನಂಬಿಕೊಂಡಿರುವ ಕಾರ್ಮಿಕರು, ವ್ಯಾಪಾರಸ್ಥರು, ಸರಕು ಸಾಗಾಣಿದಾರರು, ಉದ್ಯಮದವರು ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವುದಕ್ಕೆ ಈ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ. ಕೆಂಪುಕಲ್ಲು-ಮರಳು ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದರೂ ಇಲ್ಲಿವರೆಗೆ , ಜಿಲ್ಲೆಯ ಉಸ್ತುವಾರಿ ಸಚಿವರಾಗಲಿ, ಗಣಿ ಸಚಿವರಾಗಲಿ ಅಥವಾ ಸಂಬಂಧಪಟ್ಟ ಇಲಾಖೆಯವರಾಗಲಿ ತತ್‌ಕ್ಷಣಕ್ಕೆ ಸ್ಪಂದಿಸುವ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ಸರ್ಕಾರವು ಕೆಂಪು ಕಲ್ಲಿಗೆ ದುಬಾರಿ ರಾಯಲ್ಟಿ ವಿಧಿಸುವ ಮೂಲಕ ಜನಸಾಮಾನ್ಯರು ಮನೆ ಕಟ್ಟುವುದಕ್ಕೆ ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣ ಮಾಡಿದೆ. ಪಕ್ಕದ ರಾಜ್ಯ ಕೇರಳದಲ್ಲಿ ಕೆಂಪುಕಲ್ಲಿಗೆ ಅತ್ಯಂತ ಕಡಿಮೆ ರಾಯಲ್ಟಿ ವಿಧಿಸುತ್ತಿದ್ದರೆ, ನಮ್ಮಲ್ಲಿ ದುಬಾರಿ ರಾಜಧನ ವಸೂಲಿ ಮಾಡಲಾಗುತ್ತಿದೆ. ಕರಾವಳಿಗೆ ಪ್ರತ್ಯೇಕ ಮರಳು ನೀತಿ ರೂಪಿಸುವುದಾಗಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಹೇಳಿದ್ದು, ಎರಡು ವರ್ಷ ಕಳೆದರೂ ಕೆಂಪುಗಲ್ಲು ಹಾಗೂ ಮರಳು ಸಮಸ್ಯೆಗಳಿಗೆ ಶಾಶ್ವತ ಪರಿಹಾರದ



ಯಾವುದೇ ಕ್ರಮ ಕೈಗೊಂಡಿಲ್ಲ. ಕಾಂಗ್ರೆಸ್ ಸರ್ಕಾರವು ಅಸಂಬದ್ಧ ತೀರ್ಮಾನಗಳನ್ನು ತೆಗೆದುಕೊಂಡು ಕೆಂಪುಕಲ್ಲಿನ ಕೃತಕ ಅಭಾವನ್ನು ಸೃಷ್ಟಿಸಿ ಜನಸಾಮಾನ್ಯರು ಹಾಗೂ ಕಾರ್ಮಿಕರ ಮೇಲೆ ಬರೆ ಎಳೆಯುತ್ತಿದೆ. ಹೀಗಾಗಿ ಸರ್ಕಾರವು ಈ ಗಂಭೀರ ಸಮಸ್ಯೆಯನ್ನು ಪರಿಶೀಲಿಸಿ ವಾಸ್ತವಿಕ ನೆಲೆಯಲ್ಲಿ ನೀತಿ-ನಿಯಮಗಳನ್ನು ರೂಪಿಸಬೇಕು ಎಂದು ಕ್ಯಾ. ಚೌಟ ಆಗ್ರಹಿಸಿದ್ದಾರೆ.

ಕೆಂಪುಕಲ್ಲು ಹಾಗೂ ಮರಳು ಸಮಸ್ಯೆ ಬಗ್ಗೆ ಬಿಜೆಪಿ ದಕ್ಷಿಣ ಕನ್ನಡ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರತಿಭಟನೆ ನಡೆಸಿರುವುದು ಮಾತ್ರವಲ್ಲ, ಕೆಡಿಪಿ ಸೇರಿದಂತೆ ಅನೇಕ ಸಭೆಗಳಲ್ಲಿ ಕೆಂಪು ಕಲ್ಲು ಮರಳು ಸಮಸ್ಯೆ ಬಗ್ಗೆ ಧ್ವನಿಎತ್ತುತ್ತಿದೆ. ಹಲವು ಸಂಘಟನೆಗಳು . ಕೂಡಾ ಸಮಸ್ಯೆಯ ಗಂಭೀರತೆಯನ್ನು ಸರ್ಕಾರದ ಗಮನಕ್ಕೆ ತರುವ ಪ್ರಯತ್ನ ಮಾಡಿದೆ. ಇಷ್ಟಾಗಿಯೂ ಈ ಸಮಸ್ಯೆ ಬಗೆಹರಿಸುವುದಕ್ಕೆ ಕಾಂಗ್ರೆಸ್ ಸರ್ಕಾರ ಪ್ರಾಮಾಣಿಕ ಪ್ರಯತ್ನಗಳನ್ನು ನಡೆಸದಿರುವುದನ್ನು ನೋಡಿದರೆ, ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಭಾಗದ ಜ್ವಲಂತ ವಿಚಾರಗಳ ಕಡೆಗೆ ಸಂಪೂರ್ಣ ನಿರ್ಲಕ್ಷ್ಯ ವಹಿಸುತ್ತಿರುವುದು ಸ್ಪಷ್ಟವಾಗುತ್ತದೆ. ಒಂದು ವಾರದಲ್ಲಿ ಸಮಸ್ಯೆ ಬಗೆಹರಿಸುತ್ತೇವೆ ಎಂದ ಉಸ್ತುವಾರಿ ಸಚಿವರು ಹೇಳಿಕೆ ನೀಡುವುದರಲ್ಲೇ ಕಾಲಹರಣ ಮಾಡುತ್ತಿದ್ದಾರೆ. ಈ ಬಗ್ಗೆ ಗಣಿ ಇಲಾಖೆಯ ಅಧಿಕಾರಿಗಳನ್ನು ಪ್ರಶ್ನಿಸಿದರೆ ಸರ್ಕಾರದ ಮಟ್ಟದಲ್ಲಿಯೇ ನಿಯಮ ಸಡಿಲಿಕೆಯಾಗುವವರೆಗೆ ನಾವೇನೂ ಮಾಡಲು ಸಾಧ್ಯವಿಲ್ಲ ಎನ್ನುತ್ತಿದ್ದಾರೆ. ಹೀಗಿರುವಾಗ, ಸರ್ಕಾರವು ಈ ಕೂಡಲೇ ಎಚ್ಚೆತ್ತುಕೊಂಡು ಕೆಂಪುಕಲ್ಲು, ಮರಳು ಪೂರೈಕೆಗೆ ಅಡ್ಡಗಾಲು ಹಾಕುವ ಬದಲು ಸಮಸ್ಯೆ ಬಗೆಹರಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಬಿಜೆಪಿಯು ಕಾಂಗ್ರೆಸ್ ಸರ್ಕಾರ ಜನವಿರೋಧಿ ಹಾಗೂ ಕಾರ್ಮಿಕ ವಿರೋಧಿ ಕ್ರಮಗಳನ್ನು ಖಂಡಿಸಿ ಮತ್ತಷ್ಟು ತೀವ್ರ ರೀತಿಯ ಹೋರಾಟ ಮಾಡಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ

## ಮೀನುಗಾರರು ಸಮುದ್ರಕ್ಕೆ ತೆರಳದಂತೆ ಸೂಚನೆ

ಭಾರತೀಯ ಹವಾಮಾನ ಇಲಾಖೆ, ತಿರುವನಂತಪುರಂ ಅವರು ನೀಡಿದ ಹವಾಮಾನ ಮುನ್ಸೂಚನೆಯಂತೆ ಜುಲೈ 23 ರಿಂದ 26 ರವರೆಗೆ ಅರಬ್ಬಿ ಸಮುದ್ರದಲ್ಲಿ ಮಳೆ ಮತ್ತು ಭಾರೀ ಗಾಳಿ ಬೀಸುವುದರಿಂದ ಪ್ರಕ್ಷುಬ್ಧವಾಗಿರುತ್ತದೆ. ಆದ್ದರಿಂದ ಅನಾಹುತವನ್ನು ತಡೆಯುವ ಸಲುವಾಗಿ ನಾಡದೋಣಿ ಮೀನುಗಾರರು ಸೇರಿದಂತೆ ಯಾರೂ ಮೀನುಗಾರಿಕೆ ನಡೆಸಲು ಸಮುದ್ರಕ್ಕೆ ತೆರಳದಂತೆ ಈ ಮೂಲಕ ಎಲ್ಲಾ ಮೀನುಗಾರರಿಗೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಮೀನುಗಾರಿಕಾ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಣ್ಯವಾಸಿಗಳು ಬುಡಕಟ್ಟು ಜನಾಂಗದವರಿಗೆ ಕಾಡಿನಲ್ಲಿ ಜಾನುವಾರು ಮೇಯಿಸಲು ಅವಕಾಶ

ಅರಣ್ಯ ಹಕ್ಕು ಕಾಯಿದೆ -2006 ಅಡಿಯಲ್ಲಿ ಅರಣ್ಯವಾಸಿಗಳು ಮತ್ತು ಬುಡಕಟ್ಟು ಜನಾಂಗದವರಿಗೆ ಕಾಡಿನಲ್ಲಿ ತಮ್ಮ ಜಾನುವಾರುಗಳನ್ನು ಮೇಯಿಸಲು ಅವಕಾಶವಿದೆ ಎಂದು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ನೆರೆರಾಜ್ಯದಿಂದ ಸಾವಿರಾರು ಸಂಖ್ಯೆಯಲ್ಲಿ ದನಕರು ತಂದು ಮೇಯಿಸುವುದಕ್ಕೆ ಮಾತ್ರ ಕಡಿವಾಣ ಹಾಕಲಾಗುವುದು ಎಂದು ತಿಳಿಸಿದ್ದಾರೆ.

ಮಲೆ ಮಹದೇಶ್ವರ ಬೆಟ್ಟ ವನ್ಯಜೀವಿಧಾಮದ ವ್ಯಾಪ್ತಿಯಲ್ಲಿ ಸುಮಾರು 33ಸಾವಿರ ದನಕರುಗಳಿವೆ ಎಂದು ಪಶುಸಂಗೋಪನಾ ಇಲಾಖೆ ಅಂಕಿ ಅಂಶ ತಿಳಿಸಿದೆ. ಇಷ್ಟೊಂದು ದನಕರುಗಳು ಕಾಡಿಗೆ ಹೋಗುವುದರಿಂದ ವನ್ಯಜೀವಿಗಳಾದ ಆನೆ, ಕಾಡೆಮ್ಮೆ, ಕಾಡುಕೋಣ, ಜಿಂಕೆ, ಕಡವೆ ಇತ್ಯಾದಿಗಳಿಗೆ ಮೇವಿನ ಕೊರತೆ ಹಾಗೂ ನೀರಿನ ಕೊರತೆ ಎದುರಾಗಲಿದೆ. ಸಾಂಕ್ರಾಮಿಕ ಕಾಯಿಲೆಗಳು ವನ್ಯಜೀವಿಗಳಿಗೂ ಹಬ್ಬುವ ಅಪಾಯ ಇದೆ ಎಂದು ತಿಳಿಸಿದ್ದಾರೆ.